3	ಡಾಬಸ್‌ಪೇಟೆ	33	33	4,70,000
4	ನೆಲಮಂಗಲ ಗ್ರಾಮಾಂತರ	17	17	1,65,000

ಸಣ್ಣ ಕೈಗಾರಿಕೆಗಳ ಸ್ಥಾಪನೆ ಮತ್ತು ಅಭಿವೃದ್ಧಿ

38(132); ಡಾ॥ ಶಿವರಾಜ್ ಪಾಟೀಲ್ ಎಸ್. (ರಾಯಚೂರು ನಗರ)

ಅ) ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕೆಗಳ ಸ್ಥಾಪನೆ ಮತ್ತು ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳಾವುವು.

ಆ) ಈ ಯೋಜನೆಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ಮತ್ತು ಖರ್ಚಾಗಿರುವ ಅನುದಾನವೆಷ್ಟು: (ಸಂಪೂರ್ಣ ವಿವರ ನೀಡುವುದು)

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)

ಅ) ಸರ್ಕಾರದಿಂದ ನೇರವಾಗಿ ಯಾವುದೇ ಕೈಗಾರಿಕೆಗಳನ್ನು ಸ್ಥಾಪಿಸಲಾಗುವುದಿಲ್ಲ. ಆದರೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದೆ ಬರುವ ಉದ್ದಿಮೆದಾರರಿಗೆ ಈ ಕೆಳಕಂಡ ಸೌಲಭ್ಯಗಳು ಹಾಗೂ 2014–19ನೇ ಪ್ರಸ್ತುತ ಜಾರಿಯಲ್ಲಿರುವ ಕೈಗಾರಿಕಾ ನೀತಿಯಂತೆ ರಿಯಾಯಿತಿ ಮತ್ತು ಸೌಲಭ್ಯಗಳನ್ನು ಒದಗಿಸಲಾಗುವುದು.

- ಬಂಡವಾಳ ಹೂಡಿಕೆ ಸಹಾಯಧನ, ಮುದ್ರಾಂಕ ಶುಲ್ಕ ವಿನಾಯಿತಿ, ಪ್ರವೇಶ ತೆರಿಗೆ ವಿನಾಯಿತಿ, ಬಡ್ಡಿ ಸಹಾಯಧನ, ವಿದ್ಯುತ್‌ಚ್ಛಕ್ತಿ ಶುಲ್ಕ ವಿನಾಯಿತಿ ಹಾಗೂ ಭೂ ಪರಿವರ್ತನಾ ಶುಲ್ಕ ರಿಯಾಯಿತಿ ಮುಂತಾದವುಗಳನ್ನು ಒದಗಿಸಲಾಗುವುದು.

- ಜಿಲ್ಲಾ ಕೈಗಾರಿಕಾ ಕೇಂದ್ರಗಳ ಮೂಲಕ ಗ್ರಾಮೀಣ ಪ್ರದೇಶದಲ್ಲಿ 10.00 ಲಕ್ಷಗಳ ಮೊತ್ತದವರೆಗೆ ಬಂಡವಾಳ ಹೂಡಿ, ಸೂಕ್ಷ್ಮ ಕೈಗಾರಿಕೆಗಳನ್ನು ಸ್ಥಾಪಿಸಲು ಯುವಕ/ ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳುವಂತೆ ಉತ್ತೇಜಿಸಲು ಕರ್ನಾಟಕ ಸ್ವಯಂ

ಉದ್ಯೋಗ ಯೋಜನೆಯನ್ನು 2014–15ನೇ ಸಾಲಿನಿಂದ ಜಾರಿಗೆ ತರಲಾಗಿದೆ. ಇದರಿಂದ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಯುವಕ/ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲವಾಗುವುದು.

- ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನೆ ಯೋಜನೆಯಡಿ ಕೈಗಾರಿಕೆ ಮತ್ತು ಸೇವಾ ಚಟುವಟಿಕೆಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗದ ಜೊತೆಗೆ ಉದ್ಯೋಗವನ್ನು ಒದಗಿಸಲು ಬ್ಯಾಂಕುಗಳ ಮೂಲಕ ಆರ್ಥಿಕ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಇದರಿಂದ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಯುವಕ/ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲವಾಗುವುದು.

- ಪರಿಶಿಷ್ಟ ಜಾತಿ ಮತ್ತು ಉದ್ಯಮಗಳಿಗೆ ಸಾಪ್ಟ ಸೀಡ್ ಕ್ಯಾಪಿಟಲ್, ಗ್ರಾಮೀಣ ಕುಶಲ ಕರ್ಮಿಗಳಿಗೆ ವಸತಿ ಕಾರ್ಯಗಾರ, ವಿದ್ಯಾವಂತ ನಿರುದ್ಯೋಗಿ ಯುವಕ ಯುವತಿಯರಿಗೆ ವೃತ್ತಿ ನಿರತ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಮುಂತಾದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಆ)

- ಈಗಾಗಗಲೇ ರಾಯಚೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ವತಿಯಿಂದ ಕೈಗಾರಿಕಾ ಪ್ರದೇಶವನ್ನು 155.50 ಎಕರೆ ವಿಸ್ತೀರ್ಣದಲ್ಲಿ ಅಭಿವೃದ್ಧಿಪಡಿಸಿ, 61 ಕೈಗಾರಿಕಾ ಘಟಕಗಳಿಗೆ 74 ನಿವೇಶನಗಳನ್ನು ಹಂಚಿಕೆ ಮಾಡಿರುತ್ತದೆ.

- ಕೆಎಸ್ಎಸ್ಐಡಿಸಿ ಸಂಸ್ಥೆಯ ವತಿಯಿಂದ ಸದರಿ ಕ್ಷೇತ್ರ ವ್ಯಾಪ್ತಿಯಲ್ಲಿ 25 ಎಕರೆ ವಿಸ್ತೀರ್ಣದಲ್ಲಿ ಕೈಗಾರಿಕಾ ವಸಹಾತುಗಳನ್ನು ಅಭಿವೃದ್ಧಿಪಡಿಸಿ, 120 ಮಳಿಗೆ / ನಿವೇಶನಗಳನ್ನು ಕೈಗಾರಿಕಾ ಘಟಕಗಳಿಗೆ ಹಂಚಿಕೆ ಮಾಡಿರುತ್ತದೆ.
- 26 ಸಣ್ಣ ಕೈಗಾರಿಕೆಗಳಿಗೆ ₹ 193.85 ಲಕ್ಷ ಸಹಾಯಧನ ಬಿಡುಗಡೆ ಮಾಡಲಾಗಿದೆ.
- ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ 19 ಫಲಾನುಭವಿಗಳಿಗೆ ₹ 154.47 ಲಕ್ಷಗಳ ಸಾಲ ಮಂಜೂರಾಗಿರುತ್ತದೆ.

ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಅವ್ಯವಹಾರಗಳು

39(133); ಡಾ॥ ಶಿವರಾಜ್ ಪಾಟೀಲ್ ಎಸ್. (ರಾಯಚೂರು)

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಎಂಪ್ಲಾಯೀಸ್ ವೆಲ್ಫೇರ್ ಅಸೋಷಿಯೇಷನ್ ಗೆ ದಿನಾಂಕ: 19–04–2006 ರ ಸರ್ಕಾರಿ ಆದೇಶದಂತೆ ಪ್ರಾಧಿಕಾರದ ನೌಕರರಿಗೆ ನಿವೇಶನ ಹಂಚಿಕೆ ಮಾಡುವ ಸಲುವಾಗಿ ಎಷ್ಟು ಎಕರೆ ಜಮೀನನ್ನು ನೀಡಲಾಗಿದೆ ಮತ್ತು ಎಷ್ಟು ಎಕರೆ ಜಮೀನನನ್ನು ನೀಡಬೇಕಾಗಿದೆ.

ಆ) ಪ್ರಾಧಿಕಾರದ ತನ್ನ ನೌಕರರಿಗೆ ನಿವೇಶನ ಹಂಚಿಕೆ ಸಲುವಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಜೊತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಸಂಘವು ಪತ್ರ ವ್ಯವಹಾರವನ್ನು ಮಾಡಿರುವುದು ನಿಜವೇ:

ಇ) ಹಾಗಿದ್ದಲ್ಲಿ, ನಿವೇಶನ ಹಂಚಿಕೆ ಮಾಡಲು ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನೌಕರರ ಸಂಘದ ಬದಲು ಬೆಂಗಳೂರು